# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಮಾನ್ಯ ಸದಸ್ಯರ ಹೆಸರು | ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1061 |
| ಉತ್ತರಿಸಬೇಕಾದ ದಿನಾಂಕ | 20.08.2025 |
| ಉತ್ತರಿಸಬೇಕಾದ ಸಚಿವರು | ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಪ್ರಸ್ತುತ ರಾಜ್ಯದಲ್ಲಿರುವ ವಸತಿ ರಹಿತ ಕುಟುಂಬಗಳ ಸಂಖ್ಯೆ ಎಷ್ಟು; ವಸತಿ ರಹಿತ ಕುಟುಂಬಗಳನ್ನು ಗುರುತಿಸಲು ಸರ್ಕಾರವು ನಿಗದಿಪಡಿಸಿರುವ ಮಾನದಂಡಗಳು ಯಾವುವು; ವಸತಿ ರಹಿತರನ್ನು ಗುರುತಿಸಿ ಅವರಿಗೆ ಆಶ್ರಯ ಕಲ್ಪಿಸಿ ರಾಜ್ಯವನ್ನು ಗುಡಿಸಲು ಮುಕ್ತ ರಾಜ್ಯವನ್ನಾಗಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; (ಸಂಪೂರ್ಣ ಮಾಹಿತಿ ನೀಡುವುದು). | 2018ರಲ್ಲಿ ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ರಾಜ್ಯದ ಗ್ರಾಮೀಣ ಪ್ರದೇಶದಲ್ಲಿ ವಸತಿ/ನಿವೇಶನರಹಿತರ ಸಮೀಕ್ಷೆ ಕೈಗೊಳ್ಳಲಾಯಿತು. ಸದರಿ ಸಮೀಕ್ಷೆಯನ್ವಯ ರಾಜ್ಯದಲ್ಲಿ 1714946 ವಸತಿರಹಿತರು 703976 ನಿವೇಶನರಹಿತರು ಕಂಡು ಬಂದಿರುತ್ತಾರೆ.<br><br>ಪ್ರಧಾನ ಮಂತ್ರಿ ಆವಾಸ್ ಯೋಜನ ನಗರದಡಿ 2017ರಲ್ಲಿ ರಾಜ್ಯಾದ್ಯಂತ ನಡೆಸಿದ ಬೇಡಿಕೆ ಸಮೀಕ್ಷೆಯ ಪ್ರಕಾರ ಒಟ್ಟು 302187 ವಸತಿರಹಿತರು 1027657 ನಿವೇಶನರಹಿತರು ಕಂಡು ಬಂದಿರುತ್ತಾರೆ.<br><br>ರಾಜ್ಯವನ್ನು ಗುಡಿಸಲು ಮುಕ್ತ ಮಾಡುವ ಉದ್ದೇಶದಿಂದ ಸರ್ಕಾರವು ಪ್ರತಿ ವರ್ಷ ಮನೆಗಳನ್ನು ಪೂರ್ಣಗೊಳಿಸಲು ವಾರ್ಷಿಕ ಗುರಿಯನ್ನು ನಿಗದಿಪಡಿಸುತ್ತಿದೆ. ಪ್ರಸಕ್ತ ಆರ್ಥಿಕ ವರ್ಷದಲ್ಲಿ 1.50 ಲಕ್ಷ ಮನೆಗಳ ವಾರ್ಷಿಕ ಗುರಿಯನ್ನು ಹೊಂದಲಾಗಿದ್ದು, ಇದಕ್ಕೆ ಎದುರಾಗಿ ಹಿಂದಿನ ಸಾಲುಗಳಲ್ಲಿ ಪ್ರಗತಿಯಲ್ಲಿರುವ ಮನೆಗಳನ್ನು ಒಳಗೊಂಡಂತೆ ಈವರೆಗೆ ಒಟ್ಟು 25601 ಮನೆಗಳನ್ನು ಪೂರ್ಣಗೊಳಿಸಲಾಗಿದೆ. |
| ಆ) | ಉತ್ತರ ಕನ್ನಡ ಜಿಲ್ಲೆಯಲ್ಲಿ ವಸತಿ ರಹಿತ ಬಡಜನರಿಗೆ ವಸತಿ ಸೌಲಭ್ಯ ಕಲ್ಪಿಸಲು ಕಳೆದ 2 ವರ್ಷದಲ್ಲಿ ಎಷ್ಟು ಮನೆಗಳನ್ನು ಹಂಚಲಾಗಿದೆ; ಮತ್ತು ಜಿಲ್ಲೆಗೆ ಎಷ್ಟು ಮನೆಗಳ ಅನುಷ್ಠಾನದ ಗುರಿಯನ್ನು ನಿಗಧಿಪಡಿಸಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು) | ಉತ್ತರ ಕನ್ನಡ ಜಿಲ್ಲೆಯಲ್ಲಿ ವಸತಿ ರಹಿತ ಬಡಜನರಿಗೆ ವಸತಿ ಸೌಲಭ್ಯ ಕಲ್ಪಿಸಲು ಕಳೆದ 2 ವರ್ಷದಲ್ಲಿ ಅಂದರೆ 2023-24ನೇ ಸಾಲಿನಿಂದ 2024-25ನೇ ಸಾಲಿನಲ್ಲಿ ವಿವಿಧ ವಸತಿ ಯೋಜನೆಗಳಡಿಯಲ್ಲಿ ಒಟ್ಟಾರೆಯಾಗಿ **3724** ಮನೆಗಳನ್ನು ಮಂಜೂರು ಮಾಡಲಾಗಿದೆ. ವಿವರ ಇಂತಿದೆ: |

| ಯೋಜನೆ | ಮಂಜೂರಾದ ಮನೆಗಳು | ಪೂರ್ಣಗೊಂಡ ಮನೆಗಳು | ಪ್ರಗತಿಯಲ್ಲಿರುವ ಮನೆಗಳು | ಪ್ರಾರಂಭವಾಗದ ಮನೆಗಳು | ತಾತ್ಕಾಲಿಕವಾಗಿ ತಡೆಹಿಡಿಯಲಾದ ಮನೆಗಳು |
|---|---|---|---|---|---|
| ಪ್ರಧಾನಮಂತ್ರಿ ಆವಾಸ್ ಯೋಜನೆ-(ಗ್ರಾಮೀಣ) | 3459 | 29 | 206 | 3224 | 0 |
| ದೇವರಾಜ ಅರಸು ವಸತಿ-(ಗ್ರಾ) (ಪ್ರವಾಹ ಪೀಡಿತ) | 224 | 3 | 37 | 184 | 0 |
| ದೇವರಾಜ ಅರಸು ವಸತಿ-(ನ) (ಪ್ರವಾಹ ಪೀಡಿತ) | 41 | 0 | 5 | 36 | 0 |
| **ಒಟ್ಟು** | **3724** | **32** | **248** | **3444** | **0** |

ಜಿಲ್ಲಾವಾರು ಮಾಹಿತಿಯನ್ನು ಅನುಬಂಧ-1ರಲ್ಲಿ ಒದಗಿಸಲಾಗಿದೆ.

| | | |
|---|---|---|
| ಇ) | ಉತ್ತರ ಕನ್ನಡ ಜಿಲ್ಲೆಯಲ್ಲಿ ವಸತಿ ರಹಿತ ಮತ್ತು ನಿವೇಶನ ರಹಿತ ಒಟ್ಟು ಎಷ್ಟು ಬುಡಕಟ್ಟು ಜನಾಂಗದ ಕುಟುಂಬಗಳಿವೆ; (ತಾಲ್ಲೂಕುವಾರು ಮಾಹಿತಿ ನೀಡುವುದು) ಕಳೆದ 2 ವರ್ಷದಲ್ಲಿ ಎಷ್ಟು ಬುಡಕಟ್ಟು ಜನಾಂಗದ ಕುಟುಂಬಗಳಿಗೆ ಮನೆಗಳನ್ನು ಹಂಚಲಾಗಿದೆ; ಜಿಲ್ಲೆಯಲ್ಲಿ ಬಾಕಿ ಇರುವ ವಸತಿ ರಹಿತ ಬುಡಕಟ್ಟು ಜನಾಂಗದ ಕುಟುಂಬಗಳಿಗೆ ಆದ್ಯತೆಯ ಮೇರೆಗೆ ಆಶ್ರಯ ಕಲ್ಪಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು? (ವಿವರ ನೀಡುವುದು). | ಉತ್ತರ ಕನ್ನಡ ಜಿಲ್ಲೆಯಲ್ಲಿ ಒಟ್ಟು 22 ವಸತಿ ರಹಿತ ಮತ್ತು ನಿವೇಶನ ರಹಿತ ಬುಡಕಟ್ಟು ಜನಾಂಗದ ಕುಟುಂಬಗಳಿವೆ. ವಿವರವನ್ನು ಅನುಬಂಧ 2ರಲ್ಲಿ ಒದಗಿಸಲಾಗಿದೆ.<br><br>ಕಳೆದ 2 ವರ್ಷದಲ್ಲಿ ಉತ್ತರಕನ್ನಡ ಜಿಲ್ಲೆಯ ಬುಡಕಟ್ಟು ಜನಾಂಗದ ಕುಟುಂಬಗಳಿಗೆ ಯಾವುದೇ ಮನೆಗಳ ಗುರಿಯನ್ನು ನಿಗಧಿಪಡಿಸಿರುವುದಿಲ್ಲ.<br><br>ಮುಂಬರುವ ಆಯವ್ಯಯದಲ್ಲಿ ನೀಡಲಾಗುವ ಹೊಸಮನೆಗಳ ಗುರಿಗೆ ಅನುಗುಣವಾಗಿ ಬುಡಕಟ್ಟು ಜನಾಂಗದವರಿಗೆ ನಿಯಮಾನುಸಾರ ಗುರಿಯನ್ನು ನಿಗದಿಪಡಿಸಿ ವಸತಿ ಸೌಲಭ್ಯವನ್ನು ಒದಗಿಸಲು ಪರಿಶೀಲಿಸಲಾಗುವುದು. |

ಸಂಖ್ಯೆ: ವಇ 382 ಹೆಚ್‌ಎಎಂ 2025

(ಬಿ.ಜೆಡ್. ಜಮೀರ್ ಅಹ್ಮದ್‌ಖಾನ್)
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು